## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಷ್ಟ್ರೀಯ ಆರೋಗ್ಯ ಅಭಿಯನದ ಅಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಧ್ಯಮ ಹಂತದ ಆರೋಗ್ಯ ಪೂರೈಕೆದಾರರ ಪದನಾಮವನ್ನು ಸಮುದಾಯ ಆರೋಗ್ಯ ಅಧಿಕಾರಿಗಳು (ಗುತ್ತಿಗೆ ಆಧಾರ) ಎಂದು ಮರುಪದನಾಮೀಕರಿಸುವ ಬಗ್ಗೆ.

**ಓದಲಾಗಿದೆ:-** 1. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ ಇವರ ಪತ್ರ ಸಂಖ್ಯೆ:NHM/CPHC-UHC/MLHP Desig/27/2019-20, ದಿನಾಂಕ:07.06.2021.

2. ಜಂಟಿ ಕಾರ್ಯದರ್ಶಿಗಳು,GoI MoHFW ನವದೆಹಲಿ ರವರ ಪತ್ರ ಸಂಖ್ಯೆ:D.O No.NHM-II-Bridge Programme,Dated:23.11.2020.

******

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ ಇವರಿಂದ ಸ್ವೀಕೃತವಾದ ಪತ್ರದಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ನೇಮಕಗೊಂಡು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪ-ಕೇಂದ್ರ, ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಧ್ಯಮ ಹಂತದ ಆರೋಗ್ಯ ಪೂರೈಕೆದಾರರ (ಎಮ್.ಎಲ್.ಹೆಚ್.ಪಿ) ಪದನಾಮವನ್ನು ವಿವಿಧ ರಾಜ್ಯಗಳಲ್ಲಿ ಹಾಗೂ ಕೇಂದ್ರ ಸರ್ಕಾರವು ಪದನಾಮೀಕರಿಸಿರುವಂತೆ ರಾಜ್ಯದಲ್ಲಿಯೂ ಸಮುದಾಯ ಆರೋಗ್ಯ ಅಧಿಕಾರಿಗಳು (ಸಿ.ಹೆಚ್.ಓ) ಎಂದು ಮರುಪದನಾಮೀಕರಿಸುವಂತೆ ಕೋರಿದ್ದಾರೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಕೇಂದ್ರ ಸರ್ಕಾರದ ಜಂಟಿ ಕಾರ್ಯದರ್ಶಿಯವರ ಅರೆ ಸರ್ಕಾರಿ ಪತ್ರದಲ್ಲಿ ಎಲ್ಲಾ ರಾಜ್ಯಗಳಲ್ಲಿ ಎಮ್.ಎಲ್.ಹೆಚ್.ಪಿ. ಗಳನ್ನು ಸಮುದಾಯ ಆರೋಗ್ಯ ಅಧಿಕಾರಿಗಳು (ಸಿ.ಹೆಚ್.ಓ) ಎಂದು ಏಕರೂಪದಲ್ಲಿ ಸಂಭೋದಿಸುವ ನಿಟ್ಟಿನಲ್ಲಿ ಕ್ರಮವಹಿಸುವಂತೆ ಸೂಚಿಸಲಾಗಿರುವುದನ್ನೂ ಸಹ ಪರಿಗಣನೆಗೆ ತೆಗೆದುಕೊಳ್ಳಲಾಗಿದೆ. ಆದ್ದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಆ ಕು ಕ 72 ಎಫ್.ಪಿ.ಎಸ್ 2021**
**ಬೆಂಗಳೂರು, ದಿನಾಂಕ:24/06/2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪ-ಕೇಂದ್ರ, ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಧ್ಯಮ ಹಂತದ ಆರೋಗ್ಯ ಪೂರೈಕೆದಾರರ (ಎಮ್.ಎಲ್.ಹೆಚ್.ಪಿ) ಹುದ್ದೆಯ ಪದನಾಮವನ್ನು ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಸಮುದಾಯ ಆರೋಗ್ಯ ಅಧಿಕಾರಿ (ಗುತ್ತಿಗೆ ಆಧಾರ) ಎಂದು ಮರುಪದನಾಮೀಕರಿಸಿ ಆದೇಶಿಸಿದೆ.

**ಷರತ್ತುಗಳು:**

1. ರಾಷ್ಟ್ರೀಯ ಆರೋಗ್ಯ ಅಭಿಯಾನದ ಗುತ್ತಿಗೆ ಆಧಾರದ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳು ಮುಂದುವರಿಯಲಿವೆ.

....2

2. ಮರುಪದನಾಮೀಕರಣದಿಂದ ಯಾವುದೇ ವೇತನ ಶ್ರೇಣಿ/ವೇತನ ಹೆಚ್ಚಳ/ಮುಂಬಡ್ತಿ/ಹುದ್ದೆ ಸಕ್ರಮಾತಿಗಾಗಿ ಅರ್ಹರಾಗುವುದಿಲ್ಲ.
3. ಮರುಪದನಾಮೀಕರಣ ಮಾಡಿದ ಕಾರಣಕ್ಕಾಗಿ ಸ್ಥಳ ಬದಲಾವಣೆಗೆ ಅವಕಾಶವಿರುವುದಿಲ್ಲ.
4. ಹುದ್ದೆಗೆ ನಿಗದಿಪಡಿಸಿದ ಕರ್ತವ್ಯ ಮತ್ತು ಜವಾಬ್ದಾರಿಗಳಲ್ಲಿ ಯಾವುದೇ ಬದಲಾವಣೆ ಇರದೇ, ಹಿಂದಿನಂತೆಯೇ ಮುಂದುವರಿಯಲಿವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

24/6/2021

**( ಡಿ.ಧನಂಜಯ )**
ಸರ್ಕಾರದ ಅಧೀನ ಕಾರ್ಯದರ್ಶಿ,
(ಕುಟುಂಬ ಕಲ್ಯಾಣ),
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಎ) ಮತ್ತು, (ಎ&ಇ) ಕರ್ನಾಟಕ, ಆಡಿಟ್ ಭವನ, ಅಂಚೆಪೆಟ್ಟಿಗೆ ಸಂ:5398, ಬೆಂಗಳೂರು.
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-560023.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-560023.
4. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-560023.
6. ಯೋಜನಾ ನಿರ್ದೇಶಕರು (ಆರ್ ಸಿ ಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು-560023.
7. ಮುಖ್ಯ ಹಣಕಾಸು ಅಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು/ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4&5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿರ-2ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.